# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:03.12.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.40 (ವೀರಮದಕರಿ) ರಲ್ಲಿ ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ನಾಗಭೂಷಣ್ ಜಿ. | ಸ.ಕಾ.ನಿ.ಅ., ಎಡಿಟಿಪಿ, ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಪೂಜಾಶ್ರೀ ಆರ್. | ಸಹಾಯಕ ಅಭಿಯಂತರರು, |
| 3 | ಎಂ. ಅನಿತಾ ರಾಜು | ಕಿರಿಯ ಆರೋಗ್ಯ ಪರಿವೀಕ್ಷಕರು |
| 4 | ಭರತ್ ಕುಮಾರ್ ಎನ್. | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಚಂದ್ರಮೋಹನ್ ಎಸ್.ಸಿ. | ಬಿಡಬ್ಲ್ಯೂಎಸ್ಎಸ್‌ಬಿ |
| 6 | ಡಿ.ಟಿ. ಶ್ರೀನಿವಾಸ್ | ಸೂಪರ್‌ವೈಸರ್ |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) ಕಾಮಗಾರಿ ಇಲಾಖೆ:

ವಾರ್ಡ್ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ಹೆಚ್ಚಾಗಿದ್ದು, ಅದನ್ನು ಮುಚ್ಚಿಸಲು ನೋಡಲ್ ಅಧಿಕಾರಿಗೆ ಜಾಲಹಳ್ಳಿ ಗ್ರಾಮಸ್ಥರು ಹೇಳಿದರು. ಇಂದಿರಾ ಕ್ಯಾಂಟೀನ್ ಇಂದ ಎಂಇಎಸ್ ರಸ್ತೆ, ಮತ್ತು ಶಾರದಾಂಬ ದೇವಸ್ಥಾನ ರಸ್ತೆಗಳು ತೀರಾ ಹದಗೆಟ್ಟಿದ್ದು, ಅದನ್ನು ಮುಚ್ಚಿಸಲು ನೋಡಲ್ ಅಧಿಕಾರಿಗಳಿಗೆ ತಿಳಿಸಿದರು. ನೋಡಲ್ ಅಧಿಕಾರಿಯು ಸಹಾಯಕ ಅಭಿಯಂತರರಿಗೆ ತಿಳಿಸಿದರು.

ರಸ್ತೆ ನಾಮಫಲಕಗಳನ್ನು ಅಳವಡಿಸಲು ಹಾಜರಿರುವ ಗ್ರಾಮಸ್ಥರು ತಿಳಿಸಿದರು. ಇಂದಿರಾ ಟಾಟಾ ಅಕ್ವಿಲ್ಲಾ ಹೈಟ್ಸ್ ನಿವಾಸಿ ಅಪಾರ್ಟ್‌ಮೆಂಟ್ ಹತ್ತಿರ ಮಳೆ ಬಂದಾಗ ನೀರು ನಿಲ್ಲುತ್ತದೆ ಮತ್ತು ರೋಡ್ ತೀರಾ ಹದಗೆಟ್ಟಿದೆ ಎಂದು ತಿಳಿಸಿದರು. ಸೆಂಟ್ ಕ್ಲಾರೆಟ್ ಸ್ಕೂಲ್ ರೋಡ್ ಲ್ಲಿ ಡೆಬ್ರಿಸ್ ರಿಮೂವ್ ಮಾಡಲು ಮತ್ತು ಕಾಂಕ್ರೀಟ್ ರೋಡ್ ಹದಗೆಟ್ಟಿದ್ದು, ದುರಸ್ತಿಗೊಳಿಸಲು ಹಾಜರಿದ್ದ ಗ್ರಾಮಸ್ಥರು ತಿಳಿಸಿದರು.

2) ಬ್ಲ್ಯಾಕ್ ಸ್ಪಾಟ್ (ಘನತ್ಯಾಜ್ಯ) ಗಳ ನಿರ್ವಹಣೆ:-

ಜಾಲಹಳ್ಳಿ ವಾರ್ಡ್‌ನಲ್ಲಿ ತ್ಯಾಜ್ಯ ನಿರ್ವಹಣೆಯ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ವಾರ್ಡ್‌ನಲ್ಲಿ ಪ್ರತಿದಿನ ಕಸ ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ.

ಮಾನ್ಯ ಅಧ್ಯಕ್ಷರು ಮಾತನಾಡಿ ಬ್ಲ್ಯಾಕ್ ಸ್ಪಾಟ್ ಸ್ಥಳಗಳಲ್ಲಿ ಔಷಧಿ ಸಿಂಪಡಣೆ ಮಾಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಗಿರುತ್ತದೆ. ಘನತ್ಯಾಜ್ಯ ಇಲಾಖೆಯ ನಿರ್ವಹಣೆ ಅಧಿಕಾರಿಗಳು ಮತ್ತು ಮೇಲ್ವಿಚಾರಕರು ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ರಾತ್ರಿ ಹೊತ್ತು ಕಸ ಸುರಿಯುವವರಿಗೆ ದಂಡ ವಿಧಿಸಲು ಸಭೆಯಲ್ಲಿ ಸೂಚಿಸಿರುತ್ತಾರೆ. ಹಾಗೂ ವಾರ್ಡ್ ಪರಿಮಿತಿಯಲ್ಲಿ ಸಂಗ್ರಹವಾಗುವಂತಹ ತ್ಯಾಜ್ಯಗಳನ್ನು ವಿಂಗಡಿಸಿ (ಒಣ ಕಸ ಮತ್ತು ಹಸಿ ಕಸ) ವಿಲೇವಾರಿ ಮಾಡಲು ಸೂಚಿಸಿರುತ್ತಾರೆ.

**3) ಬೀದಿ ದೀಪದ ಬಗ್ಗೆ:**

ಹೆಚ್‌ಎಂಟಿ ಸ್ಕೂಲ್, NACIN ಸರ್ಕಲ್ ಬಳಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ . ಆದ್ದರಿಂದ ಸರಿಪಡಿಸಲು ಹಾಜರಿದ್ದ ಟಾಟಾ ಅಕ್ವಿಲ್ಲಾ ಹೈಟ್ಸ್ ನ ಇಂದಿರಾ ರವರು ತಿಳಿಸಿದರು. ದೂರವಾಣಿ ಮುಖಾಂತರ ಬೀದಿ ದೀಪಗಳ ವಿಭಾಗದವರಿಗೆ ತಿಳಿಸಲು ನೋಡಲ್ ಅಧಿಕಾರಿಯು ಸಹಾಯಕ ಅಭಿಯಂತರರಿಗೆ ಹೇಳಿದರು.

ಕೊನೆಯದಾಗಿ, ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Poojashree.R
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:40

(ನಾಗಭೂಷಣ್ ಜಿ.)
ಸ.ಕಾ.ನಿ.ಅ. ಎಡಿಟಿಪಿ ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:40